# ಕರ್ನಾಟಕ ವಿಧಾನ ಪರಿಷತ್ತು

1) ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 393
2) ಸದಸ್ಯರ ಹೆಸರು : ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)
3) ಉತ್ತರಿಸಬೇಕಾದ ದಿನಾಂಕ : 21-12-2022
4) ಉತ್ತರಿಸಬೇಕಾದ ಸಚಿವರು : ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು

| | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣ ಭಾಗದ ಮೀನುಗಾರಿಕೆ ಉತ್ತೇಜನ ನೀಡಿ ಮೀನುಗಾರಿಕೆ ವೃತ್ತಿಯನ್ನು ಮುಂದುವರಿಸಿಕೊಂಡು ಹೋಗಲು ಸರ್ಕಾರವು ಏನೇನು ಕ್ರಮಗಳನ್ನು ಕೈಗೊಂಡಿದೆ; | ರಾಜ್ಯದ ಮೀನುಗಾರರಿಗೆ ಮೀನುಗಾರಿಕೆಗೆ ಉತ್ತೇಜನ ನೀಡಿ ಮೀನುಗಾರಿಕೆ ವೃತ್ತಿಯನ್ನು ಮುಂದುವರಿಸಿಕೊಂಡು ಹೋಗಲು ಮೀನುಗಾರಿಕೆ ಇಲಾಖೆಯಿಂದ ಅನುಷ್ಠಾನ ಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು **ಅನುಬಂಧ** ದಲ್ಲಿ ನೀಡಲಾಗಿದೆ. |
| ಆ) | ಗ್ರಾಮೀಣ ಭಾಗದಲ್ಲಿ ಮೀನುಗಾರಿಕೆ ಯನ್ನು ಮಾಡಲು ಯಾವ್ಯಾವ ಸ್ಥಳಗಳಿಗೆ ಮಾನ್ಯತೆ ಇದೆ; ಯಾವ ಯಾವ ತಳಿಯ ಮೀನುಗಳನ್ನು ಗ್ರಾಮೀಣ ಭಾಗದಲ್ಲಿ ಮೀನುಗಾರಿಕೆ ಮಾಡಲು ಅನುವು ಮಾಡಿ ಕೊಡಲಾಗಿದೆ? | ಸರ್ಕಾರದ ನೀತಿ-ನಿಯಮಗಳಂತೆ ಮೀನುಗಾರಿಕೆ ಯನ್ನು ಸಮುದ್ರದಲ್ಲಿ, ನದಿ ಭಾಗಗಳಲ್ಲಿ, ಜಲಾಶಯಗಳಲ್ಲಿ, ಗ್ರಾಮ ಪಂಚಾಯತ್ ವ್ಯಾಪ್ತಿಯ ಕೆರೆಗಳಲ್ಲಿ, ಸಣ್ಣ ನೀರಾವರಿ ಇಲಾಖೆಯಡಿ ಇರುವ ಕೆರೆಗಳಲ್ಲಿ, ಚೌಳು-ಜೌಗು ಪ್ರದೇಶದಲ್ಲಿ ಹಾಗೂ ಸ್ವಂತ ಜಮೀನಿನಲ್ಲಿ ಕೊಳ ನಿರ್ಮಿಸಿಕೊಂಡು ಮೀನುಗಾರಿಕೆ ಯನ್ನು ಮಾಡಬಹುದಾಗಿದೆ.<br><br>ಕಟ್ಲಾ, ರೋಹು, ಮೃಗಾಲ್ (ಭಾರತೀಯ ದೊಡ್ಡ ಗೆಂಡೆಗಳು) ಹಾಗೂ ಸಾಮಾನ್ಯ ಗೆಂಡೆ, ಬೆಳ್ಳಿಗೆಂಡೆ, ಹುಲ್ಲುಗೆಂಡೆ ಹಾಗೂ ಇನ್ನಿತರ ಸಣ್ಣ ಗೆಂಡೆಗಳ ಇನ್ನಿತರ ಮೀನು ತಳಿಗಳ ಮೀನುಗಾರಿಕೆಯನ್ನು ಮಾಡಬಹುದಾಗಿದೆ. |

ಸಂಖ್ಯೆ: ಪಸಂಮೀ ಇ-266 ಮೀಇಯೋ 2022

15/12/2022

(ಎಸ್. ಅಂಗಾರ)
ಮೀನುಗಾರಿಕೆ, ಬಂದರು ಮತ್ತು
ಒಳನಾಡು ಜಲಸಾರಿಗೆ ಸಚಿವರು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 393 ರ ಅನುಬಂಧ

# ಮೀನುಗಾರಿಕೆ ಇಲಾಖೆಯ ಯೋಜನೆಗಳು

## ಮೀನುಗಾರಿಕೆ ಇಲಾಖೆಯಿಂದ ಕೈಗೊಂಡಿರುವ ಅಭಿವೃದ್ಧಿ ಯೋಜನೆಗಳ ವಿವಿರ

### 1. ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ

a. ರಾಜ್ಯದ ಜಲ ಪ್ರದೇಶದಲ್ಲಿ ಪ್ರತಿ ಹೆಕ್ಟೇರ್ ಉಪಯುಕ್ತತಾ ಜಲವಿಸ್ತೀರ್ಣಕ್ಕೆ 2000 ಬಲಿತ ಬಿತ್ತನೆ ಮೀನುಮರಿಗಳನ್ನು ಮೀನುಗಾರರ ಸಹಕಾರ ಸಂಘಗಳ ಮುಖಾಂತರ ಉಚಿತವಾಗಿ ಬಿತ್ತನೆ ಮಾಡಿ ಒಳನಾಡು ಮೀನು ಉತ್ಪಾದನೆಯನ್ನು ಹೆಚ್ಚಿಸಲು "ಒಳನಾಡು ಮೀನು ಕೃಷಿಗೆ ಪ್ರೋತ್ಸಾಹ" ಯೋಜನೆಯಡಿ ಮರಿಗಳನ್ನು ಬಿತ್ತನೆ ಮಾಡಲಾಗುತ್ತಿದೆ.

b. ಸರ್ಕಾರ ಸ್ವಾಮ್ಯದ ಉತ್ಪಾದನಾ ಮತ್ತು ಪಾಲನಾ ಕೇಂದ್ರಗಳಿಂದ ಖರೀದಿಸಿದ ಎಲ್ಲಾ ತಳಿಗಳ ಮೀನುಮರಿ ಬೆಲೆಯ ಶೇ.50 ರಷ್ಟು ಅಂದರೆ ವ್ಯಕ್ತಿಗತ ಗರಿಷ್ಠ ರೂ.5,000/- ಹಾಗೂ ಸಂಘ ಸಂಸ್ಥೆಗಳಿಗೆ ಗರಿಷ್ಠ ರೂ.20,000/ಕ್ಕೆ ಮಿತಿಗೊಳಪಟ್ಟು ಸಹಾಯಧನವನ್ನು ನೀಡಲಾಗುವುದು. ಮೀನುಗಾರಿಕೆ ಇಲಾಖೆಯಿಂದ ನೋಂದಾಯಿಸಿಕೊಂಡು ಸ್ವಂತ ಕೊಳಗಳಲ್ಲಿ ಮೀನು ಮರಿ ಪಾಲನೆ ಕೈಗೊಳ್ಳಲು ಮೀನು ಕೃಷಿಕರಿಗೆ ಪ್ರತಿ ಹೆಕ್ಟೇರ್ ಜಲವಿಸ್ತೀರ್ಣಕ್ಕೆ 50 ಲಕ್ಷ ಸ್ಪಾನ್ ಅಥವಾ 10 ಲಕ್ಷ ಫ್ರೈ ಖರೀದಿಸಲು ಶೇ.50 ರಷ್ಟು ಗರಿಷ್ಠ ರೂ.25,000/- ಗಳ ಸಹಾಯಧನ ಪಡೆಯಲು ಅವಕಾಶ ಕಲ್ಪಿಸಲಾಗಿದೆ.

c. ರಾಜ್ಯದಲ್ಲಿ ಲಭ್ಯವಿರುವ ಒಳನಾಡು ಹಾಗೂ ಹಿನ್ನೀರು ಜಲಸಂಪನ್ಮೂಲಗಳಲ್ಲಿ ಸಿಗಡಿ ಮತ್ತು ಹಿನ್ನೀರು ಮೀನು ಕೃಷಿಯನ್ನು ಪ್ರೋತ್ಸಾಹಿಸಲು ಪ್ರತಿ ಹೆಕ್ಟೇರ್ ವಿಸ್ತೀರ್ಣಕ್ಕೆ 1 ಲಕ್ಷ ರೂ.ಗಳ ಘಟಕ ವೆಚ್ಚಕ್ಕೆ ಶೇ.50 ರಷ್ಟು ಸಹಾಯಧನ ನೀಡಲಾಗುವುದು.

d. ಕೆರೆ/ಜಲಾಶಯದ ಅಂಚಿನಲ್ಲಿ ನಿರ್ಮಿಸಿರುವ ಮೀನುಮರಿ ಪಾಲನಾ ಕೊಳಗಳಲ್ಲಿ ಮೀನುಮರಿಗಳನ್ನು ಸಾಕಾಣಿಕೆ ಮಾಡಲು ಪ್ರತಿ ಹೆಕ್ಟರ್‌ಗೆ ರೂ.2.50ಲಕ್ಷ ಸಹಾಯಧನ ನೀಡಲಾಗುವುದು.

### 2. "ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಉಚಿತವಾಗಿ ಮೀನುಮರಿ ಬಿತ್ತನೆ"

ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆದಾಯ ತರುವ ದೃಷ್ಟಿಯಿಂದ ಮತ್ತು ಗ್ರಾಮ ಪಂಚಾಯಿತಿಗಳನ್ನು ಬಲಪಡಿಸುವ ಉದ್ದೇಶದಿಂದ ಆಯ್ದ 5650 ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಪ್ರತೀ ಕೆರೆಯ ಜಲವಿಸ್ತೀರ್ಣಕ್ಕನುಗುಣವಾಗಿ ಗರಿಷ್ಠ ರೂ.10,000/- ಮೌಲ್ಯದ ಬಲಿತ ಬಿತ್ತನೆ ಮೀನುಮರಿಗಳನ್ನು ಉಚಿತವಾಗಿ ದಾಸ್ತಾನು ಮಾಡಿ ಮೀನು ಕೃಷಿಯನ್ನು ಅಭಿವೃದ್ಧಿ ಪಡಿಸಲು ಉದ್ದೇಶಿಸಿದೆ. "ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಉಚಿತವಾಗಿ ಮೀನುಮರಿ ಬಿತ್ತನೆ" ಯೋಜನೆಯಡಿ ರೂ.5.65 ಕೋಟಿ ವೆಚ್ಚದಲ್ಲಿ 5650 ಗ್ರಾಮ ಪಂಚಾಯಿತಿ ಕೆರೆಗಳಲ್ಲಿ ಮೀನುಮರಿಗಳನ್ನು ಬಿತ್ತನೆ ಮಾಡಲಾಗುವುದು.

### 3. ಜಲಾಶಯಗಳಲ್ಲಿ ಮೀನು ಮರಿ ಬಿತ್ತನೆ

ರಾಜ್ಯದ ಆಯ್ದ ಜಲಾಶಯಗಳಲ್ಲಿ ಬೆರಳುದ್ದದ ಮೀನು ಮರಿ (Advanced fingerlings) ಬಿತ್ತನೆ ಮಾಡುವ ಮೂಲಕ ಮೀನುಗಾರಿಕೆ ಅಭಿವೃದ್ಧಿ ಕೈಗೊಳ್ಳುವುದು ಉದ್ದೇಶವಾಗಿದೆ. ಅಗತ್ಯವಾದ

**12. ವಾಣಿಜ್ಯ ಬ್ಯಾಂಕುಗಳಿಗೆ ಬಡ್ಡಿ ವ್ಯತ್ಯಾಸವನ್ನು ತುಂಬಿಕೊಡುವುದು**

ಮೀನುಗಾರರು ವಾಣಿಜ್ಯ ಬ್ಯಾಂಕುಗಳಿಂದ ಅಲ್ಪಾವಧಿ ಸಾಲ ತೆಗೆದುಕೊಂಡು ಮೀನುಗಾರಿಕೆ ಚಟುವಟಿಕೆಗಳಿಗೆ ಕೈಗೊಳ್ಳಲು ಅನುಕೂಲವಾಗುವಂತೆ ವ್ಯತ್ಯಾಸದ ಬಡ್ಡಿಯನ್ನು ತುಂಬಿಕೊಡಲು ಈ ಯೋಜನೆಯಡಿ ಅವಕಾಶ ಕಲ್ಪಿಸಲಾಗಿದೆ. ಮೀನುಗಾರರು ರೂ.50,000/-ಗಳ ವರೆಗೆ ಸಾಲ ಪಡೆಯಲು ಅವಕಾಶವಿರುತ್ತದೆ.

ಮೀನುಗಾರಿಕೆ ಚಟುವಟಿಕೆಗಳನ್ನು ಕೈಗೊಳ್ಳಲು ಮಹಿಳಾ ಮೀನುಗಾರರಿಗೆ ರೂ.50,000/-ಗಳವರೆಗೆ ಶೇ.2ರ ಬಡ್ಡಿ ದರದಲ್ಲಿ ವಾಣಿಜ್ಯ / ಗ್ರಾಮೀಣ ಪ್ರಾದೇಶಿಕ ಬ್ಯಾಂಕ್‌ಗಳಿಂದ ನೀಡುತ್ತಿರುವ ಸಾಲವನ್ನು 2018-19ನೇ ಸಾಲಿನಿಂದ ಶೂನ್ಯ ಬಡ್ಡಿ ದರದಲ್ಲಿ ನೀಡಲಾಗುತ್ತಿದೆ.

**13. ಮತ್ಸ್ಯಾಶ್ರಯ ಯೋಜನೆ:** ಮೀನುಗಾರರ ಮನೆಗಳಿಗೆ ಹೆಚ್ಚುತ್ತಿರುವ ಬೇಡಿಕೆಯನ್ನು ಪೂರೈಸಲು ರಾಜ್ಯ ಸರ್ಕಾರವು 2006-07ರಲ್ಲಿ ನಿರ್ವಸಿತ ನಿವೇಶನ ಹೊಂದಿರುವ ಮೀನುಗಾರರಿಗೆ ಮತ್ಸ್ಯಾಶ್ರಯ ಯೋಜನೆಯನ್ನು ಕೈಗೆತ್ತಿಕೊಂಡಿದೆ. ಮತ್ಸ್ಯಾಶ್ರಯ ಯೋಜನೆಯಡಿ ರೂ.1.20 ಲಕ್ಷ ನೆರವು, ರೂ. 1.75 ಲಕ್ಷ ಮತ್ತು ರೂ. 2.00 ಲಕ್ಷಗಳನ್ನು ಕ್ರಮವಾಗಿ ಸಾಮಾನ್ಯ, ಪರಿಶಿಷ್ಟ ಜಾತಿ ಮತ್ತು ನಗರ ಪ್ರದೇಶದ ಫಲಾನುಭವಿಗಳಿಗೆ ನೀಡಲಾಗುತ್ತದೆ. 2022-23ನೇ ಸಾಲಿನಲ್ಲಿ 5000 ಮನೆಗಳನ್ನು ಮಂಜೂರು ಮಾಡಲಾಗಿದ್ದು, ಕ್ಷೇತ್ರವಾರು 4053 ಮನೆಗಳನ್ನು ವಿತರಿಸಲಾಗಿದೆ.

**4405-ಬಂಡವಾಳ ಹೂಡಿಕೆಗಳು**

**14. ಮೀನುಗಾರಿಕೆ ಬಂದರುಗಳ ನಿರ್ಮಾಣ (ಕೇಂದ್ರ ಪುರಸ್ಕೃತ ಯೋಜನೆ)**

ಮಂಜೂರಾದ ಮೀನುಗಾರಿಕೆ ಬಂದರುಗಳ ಕಾಮಗಾರಿ ಮುಂದುವರಿಕೆಗೆ ಹಾಗೂ ಹೊಸ ಯೋಜನೆಗಳ ಕೈಗೊಳ್ಳಲು ಅವಕಾಶ ಮಾಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳ ಪ್ರಕಾರ ಯೋಜನಾ ವೆಚ್ಚಕ್ಕೆ ಕೇಂದ್ರ ಸರ್ಕಾರವು ಪ್ರತಿಶತ 60 ರಷ್ಟು ಮತ್ತು ರಾಜ್ಯ ಸರ್ಕಾರವು ಪ್ರತಿಶತ 40 ರಷ್ಟನ್ನು ಭರಿಸುತ್ತದೆ. ಈಗಾಗಲೇ ಮಂಜೂರಾದ ಯೋಜನೆಗಳು ಹಿಂದಿನ ಅನುಪಾತದಲ್ಲಿಯೇ ಮುಂದುವರೆಯುತ್ತದೆ.

**15. ಮೀನುಗಾರಿಕೆ ಜೆಟ್ಟಿ ಮತ್ತು ಇಳಿದಾಣಗಳ ನಿರ್ಮಾಣ ಮತ್ತು ನವೀಕರಣ**

ಮೀನುಗಾರಿಕೆ ಇಳಿದಾಣ ಕೇಂದ್ರಗಳ ನಿರ್ಮಾಣ ಹಾಗೂ ನವೀಕರಣಕ್ಕೆ ಅವಕಾಶ ಕಲ್ಪಿಸಲಾಗಿದೆ.

**16. ಮೀನುಗಾರಿಕೆ ಕೊಂಡಿ ರಸ್ತೆಗಳ ಸೇತುವೆಗಳ ಮತ್ತು ಜೆಟ್ಟಿಗಳ ನಿರ್ಮಾಣ ನಬಾರ್ಡ್ ಸಹಾಯ**

ಈ ಲೆಕ್ಕ ಶೀರ್ಷಿಕೆಯಡಿ ನಬಾರ್ಡ್ ನೆರವಿನೊಂದಿಗೆ ಗ್ರಾಮೀಣ ಪ್ರದೇಶಗಳಲ್ಲಿ ಮೀನುಗಾರಿಕೆ ರಸ್ತೆ, ಸೇತುವೆ ಮತ್ತು ಜೆಟ್ಟಿಗಳ ನಿರ್ಮಾಣ, ಶುಚಿಯಾದ ಮೀನುಮಾರುಕಟ್ಟೆಗಳ ನಿರ್ಮಾಣ, ಮೀನು ಮರಿ ಉತ್ಪಾದನಾ ಕೇಂದ್ರಗಳ ಆಧುನೀಕರಣ ಕಾಮಗಾರಿಗಳನ್ನು ತೆಗೆದುಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಪ್ರಸ್ತುತ ಸಾಲಿನಲ್ಲಿ ಯಾವುದೇ ಅನುದಾನ ಒದಗಿಸಿರುವುದಿಲ್ಲ.

**17. ಮೀನುಗಾರಿಕೆ ಬಂದರುಗಳ ಹೂಳೆತ್ತುವಿಕೆ:** ರಾಜ್ಯದಲ್ಲಿ ಪ್ರಮುಖ ಮೀನುಗಾರಿಕಾ ಬಂದರುಗಳು ಮತ್ತು ಸಣ್ಣ ಇಳಿದಾಣ ಕೇಂದ್ರಗಳನ್ನು ನಿರ್ಮಿಸಲಾಗಿದೆ ಮತ್ತು ನಿರ್ಮಾಣದ ನಂತರ ಆವರ್ತಕ

ಹೂಳೆತ್ತುವಿಕೆ ಕೊರತೆ ಮತ್ತು ಇತರ ನೈಸರ್ಗಿಕ ಕಾರಣಗಳಿಂದಾಗಿ ಕೆಲವು ಬಂದರುಗಳು ಮತ್ತು ಇಳಿದಾಣ ಕೇಂದ್ರಗಳು ಹೂಳು ತುಂಬುವಿಕೆಯ ತೀವ್ರ ಸಮಸ್ಯೆಯನ್ನು ಎದುರಿಸುತ್ತಿವೆ. ಹೂಳು ತುಂಬುವ ಸಮಸ್ಯೆಯನ್ನು ಪರಿಹರಿಸಲು ಬಂದರುಗಳ ಹೂಳೆತ್ತುವ ಕರ್ಯವನ್ನು ಕೈಗೆತ್ತಿಕೊಳ್ಳಲಾಗುತ್ತಿದೆ.

**ಜಿಲ್ಲಾ ಪಂಚಾಯತ್ ಯೋಜನೆಗಳು**

**1.ಮೀನುಗಾರಿಕೆ ಕಟ್ಟಡಗಳು ಮತ್ತು ಸೌಲಭ್ಯಗಳ ನಿರ್ಮಾಣ ಮತ್ತು ನಿರ್ವಹಣೆ**

ಈ ಲೆಕ್ಕ ಶೀರ್ಷಿಕೆಯಡಿ ಕಛೇರಿ ಕಟ್ಟಡಗಳ ನಿರ್ಮಾಣ ಮತ್ತು ನಿರ್ವಹಣೆ, ಮೀನು ಮರಿ ಉತ್ಪಾದನಾ ಕೇಂದ್ರಗಳ ಮತ್ತು ತಾಲ್ಲೂಕು ಮಟ್ಟದ ನರ್ಸರಿಗಳ ದುರಸ್ತಿ ಮತ್ತು ಸುಧಾರಣೆ, ಕರಾವಳಿ ಜಿಲ್ಲೆಗಳಲ್ಲಿ ಮೀನುಗಾರಿಕೆ ಜೆಟ್ಟಿಗಳ, ಇಳಿದಾಣ ಕೇಂದ್ರಗಳ, ಹರಾಜು ಪ್ರಾಂಗಣಗಳ ನಿರ್ಮಾಣ ಮತ್ತು ನಿರ್ವಹಣೆ, ಕಾರವಾರ, ಹಾಸನ, ಬೆಳಗಾವಿ, ಕಲಬುರ್ಗಿ, ದಕ್ಷಿಣ ಕನ್ನಡ, ಬೀದರ್, ಕೋಲಾರ, ಕೊಡಗು ಮತ್ತು ವಿಜಯಪುರ ಜಿಲ್ಲೆಗಳ ಮತ್ಸ್ಯಾಲಯಗಳ ನಿರ್ವಹಣೆ ವೆಚ್ಚ ಮತ್ತು ಇತರ ಸಾಮಗ್ರಿಗಳ ಖರೀದಿಗೆ ಅನುದಾನವನ್ನು ಒದಗಿಸಲಾಗಿದೆ.

**2.ಒಳನಾಡು ಮೀನುಗಾರಿಕೆ ಅಭಿವೃದ್ಧಿಗಾಗಿ ಸಹಾಯ**

ಈ ಯೋಜನೆಯಡಿ ಜೌಗು ಹಾಗೂ ಚೌಳು ಪ್ರದೇಶಗಳಲ್ಲಿ ಒಂದು ಎಕರೆ ಮೀನು ಕೃಷಿ ಕೊಳ ನಿರ್ಮಿಸಲು ಪ್ರತಿ ಎಕರೆ ಮೀನು ಕೃಷಿ ಕೊಳ ನಿರ್ಮಾಣ ಮಾಡಲು ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,80,000/- ಸಹಾಯಧನವಾಗಿ ನೀಡಲಾಗುತ್ತದೆ. ಒಂದು ಎಕರೆ ಸ್ವಂತ ಜಮೀನಿನಲ್ಲಿ ಮೀನುಕೃಷಿ ಕೊಳವನ್ನು ನಿರ್ಮಾಣ ಮಾಡಿ ಮೀನುಗಾರಿಕೆಯನ್ನು ತೆಗೆದುಕೊಳ್ಳಲು ಖಾಸಗಿ ವ್ಯಕ್ತಿಗಳಿಗೆ ಘಟಕ ವೆಚ್ಚದ ಶೇಕಡ 40 ರಷ್ಟು ಅಂದರೆ ಗರಿಷ್ಠ ರೂ.4,40,000/- ಸಹಾಯಧನವಾಗಿ ನೀಡಲಾಗುತ್ತದೆ. ಅಲ್ಲದೆ, ಹುಲ್ಲುಗೆಂಡೆ ಮೀನುಮರಿಗಳನ್ನು ಕೆರೆಗಳಲ್ಲಿ ಬಿತ್ತನೆ ಮಾಡಿದ ಕೃಷಿಕರಿಗೆ ಶೇಕಡ 50 ರಷ್ಟು ಗರಿಷ್ಠ ರೂ.10,000/- ಗಳಿಗೆ ಮೀರದಂತೆ ಸಹಾಯಧನವನ್ನು ನೀಡಲಾಗುವುದು ಹಾಗೂ ಬಾವಿ ಮತ್ತು ನೀರಾವರಿ ಹೊಂಡಗಳಲ್ಲಿ ಮೀನು ಕೃಷಿಗಾಗಿ 500 ಸಾಮಾನ್ಯ ಗೆಂಡೆ ಮರಿಗಳನ್ನು ಉಚಿತವಾಗಿ ಸರಬರಾಜು ಮಾಡಿ ಮೀನು ಕೃಷಿಯನ್ನು ಪ್ರೋತ್ಸಾಹಿಸಲಾಗುವುದು. ಈ ಯೋಜನೆಯಡಿ ಅನುದಾನವನ್ನು ಮೀನುಮರಿ ಕೇಂದ್ರದಲ್ಲಿ ಮೀನುಮರಿ ಉತ್ಪಾದನೆಗೆ, ತಾಲ್ಲೂಕು ಮಟ್ಟದ ನರ್ಸರಿಗಳಲ್ಲಿ, ಫಾರಂಗಳಲ್ಲಿ, ಕೇಜ್ ಮತ್ತು ಪೆನ್‌ಗಳಲ್ಲಿ ಮೀನುಮರಿ ಪಾಲನೆಗೆ, ಹಾಗೂ ನಿರ್ವಹಣೆಗೆ ತಗಲುವ ವೆಚ್ಚಗಳಿಗೆ, ಮೀನುಮರಿ ಖರೀದಿ ಮತ್ತು ಸಾಗಾಣಿಕೆಗೆ, ವಾಹನಗಳ ಖರೀದಿ, ನಿರ್ವಹಣೆ ಮತ್ತು ಇತರ ಸಲಕರಣೆಗಳ ಖರೀದಿಗೆ ಉಪಯೋಗಿಸಲು ಅವಕಾಶ ಕಲ್ಪಿಸಲಾಗಿದೆ.

**3. ಮೀನು ಮಾರುಕಟ್ಟೆಗಳ ನಿರ್ಮಾಣ ಮತ್ತು ಮೀನು ಮಾರಾಟಕ್ಕೆ ಸಹಾಯ**

ಮೀನುಗಾರರು ಮೀನನ್ನು ತಾಜಾ ಹಾಗೂ ಆರೋಗ್ಯಕರ ಸ್ಥಿತಿಯಲ್ಲಿ ಮಾರಾಟ ಮಾಡಲು ಅನುಕೂಲವಾಗುವಂತೆ ಶಾಖ ನಿರೋಧಕ ಪೆಟ್ಟಿಗೆ ಮತ್ತು ಸೈಕಲ್ಲುಗಳನ್ನು ಖರೀದಿಸಲು ಪ್ರತಿಶತ 50 ರ ನೆರವಿನೊಂದಿಗೆ ಗರಿಷ್ಠ ರೂ.4,000/- ಸಹಾಯ ಧನವನ್ನು ಹಾಗೂ ದ್ವಿಚಕ್ರ ವಾಹನ ಮತ್ತು ಶಾಖ ನಿರೋಧಕ ಪೆಟ್ಟಿಗೆ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ. 30,000/- ಗಳ ಸಹಾಯಧನವನ್ನು ನೀಡಲಾಗುವುದು.

ಇಳಿದಾಣ ಕೇಂದ್ರಗಳಿಂದ ತಾಜಾ ಮೀನನ್ನು ಆರೋಗ್ಯಕರ ರೀತಿಯಲ್ಲಿ ಮಾರಾಟ ಸ್ಥಳಗಳಿಗೆ ತ್ವರಿತ ಸಾಗಾಣಿಕೆಗಾಗಿ ಮೀನುಗಾರರಿಗೆ ವಾಹನವನ್ನು ಖರೀದಿಸಲು ಆರ್ಥಿಕ ನೆರವನ್ನು ನೀಡುವ ಉದ್ದೇಶದಿಂದ ಮತ್ಸ್ಯವಾಹಿನಿ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ತ್ರಿಚಕ್ರ ಟೆಂಪೋ ರಿಕ್ಷಾವನ್ನು ಖರೀದಿಸಲು ಶೇ.25ರಷ್ಟು ಗರಿಷ್ಠ ರೂ.1,20,000 ಗಳ ಸಹಾಯಧನವನ್ನು ಹಾಗೂ ನಾಲ್ಕು ಚಕ್ರದ ವಾಹನ ಖರೀದಿಸಲು ಶೇ.25 ರಷ್ಟು ಗರಿಷ್ಠ ರೂ.2,40,000/- ಗಳ ಸಹಾಯಧನವನ್ನು ನೀಡಲಾಗುವುದು.

ಇದಲ್ಲದೆ ಸದರಿ ಯೋಜನೆಯಡಿ ಯಾಂತ್ರೀಕೃತವಲ್ಲದ (ಪಾತಿ) ದೋಣಿ ಹೊಂದಿರುವ ಮೀನುಗಾರರಿಗೆ ಮೀನುಗಾರಿಕೆ ಸಲಕರಣೆಗಳನ್ನು ಗರಿಷ್ಠ ರೂ.10,000/- ಗಳ ಘಟಕ ವೆಚ್ಚದಲ್ಲಿ ಖರೀದಿಸಲು ಮತ್ತು ಪ್ರತಿಶತ 50ರಷ್ಟು ಅಂದರೆ ಗರಿಷ್ಠ ರೂ.5000/- ಗಳನ್ನು ಸಹಾಯಧನವಾಗಿ ನೀಡಲು ಅವಕಾಶ ಕಲ್ಪಿಸಲಾಗಿದೆ.

**4. ಪ್ರದರ್ಶನ ಮತ್ತು ತರಬೇತಿ**

ಮೀನು ಕೃಷಿಯ ಹಿತದೃಷ್ಟಿಯಿಂದ ಸಾರ್ವಜನಿಕರ ಮಾಹಿತಿಗಾಗಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ನಡೆಯುವ ವಸ್ತು ಪ್ರದರ್ಶನದಲ್ಲಿ ಮೀನುಗಾರಿಕಾ ಇಲಾಖಾ ಕಾರ್ಯಕ್ರಮಗಳ ಬಗ್ಗೆ ಪ್ರದರ್ಶಿಸಲಾಗುವುದು. ಹಾಗೂ ಆಸಕ್ತಿ ಹೊಂದಿದ ಕೃಷಿಕರಿಗೆ ಮೀನು ಕೃಷಿಯ ಬಗ್ಗೆ ತರಬೇತಿ ನೀಡುವುದು, ಮತ್ಸ್ಯಪಾಲನೆ ಮತ್ತು ಇಲಾಖಾ ಕಾರ್ಯಕ್ರಮಗಳ ಬಗ್ಗೆ ಮಾಹಿತಿ ನೀಡಲಾಗುವುದು.